ಸಿ.ಸಿಃ 2357/2022

ಚಾ.ಸಾಃ 04

ಪ್ರಾ.ಸಾಃ 02

# ದಿವಾಣಿ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ, ಬಸವನ-ಬಾಗೇವಾಡಿ

**ಸಾಕ್ಷಿಗೆ ದಿನಾಂಕ 06.08.2025 ರಂದು ಪ್ರಮಾಣ ವಚನ ಬೋಧಿಸಲಾಯಿತು.**

ಹೆಸರು ಃ ಪ್ರಭುರಾಯ ಮುಳಸಾವಳಗಿ

ತಂದೆಯ ಹೆಸರು ಃ ಸಂಗಪ್ಪ

ವಯಸ್ಸು ಃ **46** ವರ್ಷ

ಉದ್ಯೋಗ ಃ ವ್ಯವಸಾಯ

ವಾಸಸ್ಥಳ ಃ ಕಡಕೋಳ

**ಮುಖ್ಯ ವಿಚಾರಣೆ ಸರ್ಕಾರಿ ಅಭಿಯೋಜಕರವರಿಂದಃ**

ಸಾಕ್ಷಿಗೆ ಒಂದು ದಾಖಲೆಯನ್ನು ತೋರಿಸಲಾಯಿತು. ಅದು ಸ್ಥಳ ಕೃತ್ಯ ಮಹಜರಾಗಿದ್ದು, ಸಾಕ್ಷಿ ಅದರಲ್ಲಿರುವ ಸಹಿಯನ್ನು ನೋಡಿ ಗುರುತಿಸಿದ್ದರಿಂದ ಅದನ್ನು ನಿಪಿ-4 ಎಂದು, ಅದರಲ್ಲಿರುವ ಸಾಕ್ಷಿಯ ಸಹಿಯನ್ನು ನಿಪಿ-4 ಎ ಎಂದು ಗುರುತಿಸಲಾಯಿತು. ಅದರಲ್ಲಿ ಏನು ಬರೆಯಲಾಗಿದೆ ಎಂದು ನನಗೆ ಗೊತ್ತಿಲ್ಲ. ನನ್ನ ಸಮಕ್ಷಮ ಪೊಲೀಸರು ಯಾವುದೇ ಮಹಜರ ಕ್ರಮ ಜರುಗಿಸಿರುವುದಿಲ್ಲ. ಸಾಕ್ಷಿಗೆ ಎರಡು ಪೋಟೋಗಳನ್ನು ತೋರಿಸಿದ್ದು, ಅವುಗಳನ್ನು ನಿಪಿ-5 ಮತ್ತು 6 ಎಂದು ಗುರುತಿಸಲಾಯಿತು, ಅದು ಯಾವ ಕಾರಣಕ್ಕಾಗಿ ತಗೆದಿರುತ್ತಾರೆ ಎಂದು ನನಗೆ ಗೊತ್ತಿಲ್ಲ.

**(ಮಾನ್ಯ ಸ.ಸ.ಅ ರವರು ಸಾಕ್ಷಿ ಪ್ರತಿಕೂಲವಾಗಿ ಸಾಕ್ಷಿ ನುಡಿದಿದ್ದಾರೆ ಹಾಗಾಗಿ ಅವರನ್ನು ಪ್ರತಿಕೂಲ ಸಾಕ್ಷಿ ಎಂದು ಘೋಷಿಸಿ ಪಾಟೀ ಸವಾಲು ಮಾಡಲು ಅನುಮತಿ ನೀಡಬೇಕೆಂದು ಕೋರಿದ್ದು, ಅನುಮತಿಸಲಾಯಿತು)**

**ಸಿ.ಸಿಃ 2357/2022**

**ಚಾ.ಸಾಃ 04**

**ಪ್ರಾ.ಸಾಃ 02**

**<u>ಪಾಟೀ ಸವಾಲು ಮಾನ್ಯ ಸ.ಸ.ಅ.ರವರಿಂದ</u>**

2. ದಿಃ **08.11.2021** ರಂದು ಪೊಲೀಸರು ಅಪಘಾತದ ಸ್ಥಳದಲ್ಲಿ ಮಹಜರು ಕ್ರಮ ಜರುಗಿಸುವಾಗ ನಿಪಿ-**4** ಕ್ಕೆ ಸಹಿ ಪಡೆದುಕೊಂಡಿರುತ್ತಾರೆ ಎಂದರೆ ಸರಿಯಲ್ಲ. ಆ ಸಮಯದಲ್ಲಿ ನಿಪಿ-**5** ಮತ್ತು **6** ರಂತೆ ಫೋಟೋಗಳನ್ನು ತಗೆಯಲಾಗಿತ್ತು ಎಂದರೆ ಸರಿಯಲ್ಲ. ಎಲ್ಲಾ ವಿಷಯ ಗೊತ್ತಿದ್ದರು ಆರೋಪಿತರಿಗೆ ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆಂದರೆ ಸರಿಯಲ್ಲ.

**ಪಾಟೀ ಸವಾಲುಃ ಆರೋಪಿತರ ಪರ ವಕೀಲರು ಏನೂ ಇಲ್ಲ ಅಂತಾ ಹೇಳಿರುತ್ತಾರೆ.**

**ಮರುವಿಚಾರಣೆ ಇಲ್ಲ.**

**(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದಂತೆ ಬೆರಳಚ್ಚು ಮಾಡಲಾಯಿತು)**

**ಓ ಹೇ ಕೇ ಸರಿ ಅದೆ.**

**(ಶ್ರೀ. ಅಮೀತ್ ಘಟ್ಟಿ )**

**ದಿವಾಣಿ ನ್ಯಾಯಾಧೀಶರು ಮತ್ತು**

**ನ್ಯಾಯಿಕ ದಂಡಾಧಿಕಾರಿಗಳು**

**ಬಸವನ ಬಾಗೇವಾಡಿ.**